SE (IT & MIS)

3

KPTCL

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮ ಕಾರ್ಯಾಲಯ, ಕಾವೇರಿ ಭವನ, ಬೆಂಗಳೂರು - 560 009.

ಕವಿಪ್ರನಿನಿ/ಬಿ9/39331/16-17
ಲಗತ್ತು: 5.

ದಿನಾಂಕ 04 DEC 2017

## ಸುತ್ತೋಲೆ

ವಿಷಯ:- ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮಗಳ ಬಗ್ಗೆ ಹಾಗೂ Randomization ಮೂಲಕ ಕಾಮಗಾರಿಗಳನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ:-
1. ಅಧಿಸೂಚನೆ ಸಂಖ್ಯೆ ಸಂವ್ಯಶಾಇ 22 ಶಾಸನ 2016 ದಿನಾಂಕ 29/06/2017 ಹಾಗೂ ದಿನಾಂಕ 17/07/2017.
2. ಕವಿಪ್ರನಿನಿ/ಬಿ19/84/94-95 ದಿನಾಂಕ 23/08/2017.
3. ಅಧಿಸೂಚನೆ ಸಂಖ್ಯೆ ಆಇ876 ವೆಚ್ಚ-12/2017 ದಿನಾಂಕ 15/09/2017.
4. ಸರ್ಕಾರದ ಸುತ್ತೋಲೆ ಸಂಖ್ಯೆ ಆಇ876 (ಪಿ-1) ವೆಚ್ಚ-12/17 ದಿನಾಂಕ 12/10/2017.

<><><><><>

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ 2016 ರಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಗುತ್ತಿಗೆದಾರರಿಗೆ ಟೆಂಡರ್ ಕಾಮಗಾರಿಗಳಲ್ಲಿ ಮೀಸಲಾತಿ ನೀಡುವಂತೆ ಹೊರಡಿಸಲಾದ ಅಧಿಸೂಚನೆಗಳನ್ನು ಉಲ್ಲೇಖ (2) ರಲ್ಲಿನ ಪತ್ರದಲ್ಲಿ ಎಲ್ಲಾ ವಲಯಗಳಿಗೆ ಕಳುಹಿಸಲಾಗಿದ್ದು, ನಿಗಮದ ಅಂತರ್ಜಾಲದಲ್ಲಿ ಸಹ ಪ್ರಕಟಿಸಲಾಗಿದೆ.

ಮುಂದುವರೆದಂತೆ, ಸರ್ಕಾರದ ಅಧಿಸೂಚನೆ ದಿನಾಂಕ 15/09/2017 ರಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ನಿಯಮಗಳು 2017 ನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿದ್ದು, ಸದರಿ ಅಧಿಸೂಚನೆಯಲ್ಲಿ ನಿಯಮ 27 (A) ರಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಮುದಾಯಕ್ಕೆ ಸೇರಿದ ಟೆಂಡರ್‌ದಾರರಿಗೆ ರೂ.50.00 ಲಕ್ಷಗಳ ಮಿತಿಯೊಳಗಿನ ನಿರ್ಮಾಣ ಕಾಮಗಾರಿಗಳ ಟೆಂಡರ್‌ಗಳಲ್ಲಿ ಆದ್ಯತೆ ನೀಡುವ ನಿಯಮ ಹೊರಡಿಸಲಾಗಿದೆ. ಸದರಿ ನಿಯಮಗಳ ಅನುಸಾರ ಸಂಬಂಧಪಟ್ಟ ಟೆಂಡರ್ ಆಹ್ವಾನಿಸುವ ಪ್ರಾಧಿಕಾರವು ಕಾಮಗಾರಿಗಳ ಆಯ್ಕೆಯನ್ನು Randomization ಪದ್ಧತಿ ಮೂಲಕ ಮಾಡಿಕೊಳ್ಳಲು ತಿಳಿಸಲಾಗಿದೆ.

ಈ ಸಂಬಂಧ, ಸರ್ಕಾರದ ದಿನಾಂಕ 12/10/2017 ರ ಸುತ್ತೋಲೆಯಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ (ಇ- ಆಡಳಿತ) ಇಲಾಖೆಯು Randomization ಕೈಗೊಳ್ಳಲು ಅನುಕೂಲವಾಗುವಂತೆ ತಂತ್ರಾಂಶವನ್ನು ಅಭಿವೃದ್ಧಿ ಪಡಿಸಿದ್ದು, ಅದು ದಿನಾಂಕ 09/10/2017 ರಿಂದ e-Procurement Portal ನಲ್ಲಿ ಲಭ್ಯವಿದ್ದು, ಸದರಿ ತಂತ್ರಾಂಶವನ್ನು ಎಲ್ಲಾ ಇಲಾಖೆಗಳ ಟೆಂಡರ್ ಆಹ್ವಾನಿಸುವ ಪ್ರಾಧಿಕಾರಗಳು ಕಡ್ಡಾಯವಾಗಿ ಉಪಯೋಗಿಸಿಕೊಳ್ಳತಕ್ಕದೆಂದು ಸೂಚಿಸಲಾಗಿದೆ.

| | |
|---|---|
| EE (IT) | |
| EE (MIS) | |
| DCA (IT) | |
| | 4/12/17 |
| SEE (IT&MIS) | |

ACE-4 | AE-1
4/12/2017

ಈ ಹಿನ್ನೆಲೆಯಲ್ಲಿ, ಉಲ್ಲೇಖಿತ ಸರ್ಕಾರದ ಅಧಿಸೂಚನೆಗಳು ಹಾಗೂ ಸುತ್ತೋಲೆಯ ಪ್ರತಿಗಳನ್ನು ಲಗತ್ತಿಸಲಾಗಿದ್ದು, ಸದರಿ ಅಧಿಸೂಚನೆ ಮತ್ತು ಸುತ್ತೋಲೆಯ ನಿಬಂಧನೆಗಳಂತೆ ಕ್ರಮಕೈಗೊಳ್ಳಲು ಸೂಚಿಸಲಾಗಿದೆ.

1/12/17

ಉಪ ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ)
ಕವಿಪ್ರನಿನಿ, ಬೆಂಗಳೂರು.

**ಪ್ರತಿಗಳು:-**

1. ಎಲ್ಲಾ ಮುಖ್ಯ ಇಂಜಿನಿಯರುಗಳು (ವಿ), ಕವಿಪ್ರನಿನಿ.
2. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ.
3. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ)/ (ಸಿವಿಲ್), ಕವಿಪ್ರನಿನಿ.
4. ಎಲ್ಲಾ ಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ.
5. ಅಧೀಕ್ಷಕ ಇಂಜಿನಿಯರ್ (ವಿ), (ಐಟಿ ಮತ್ತು ಎಂಐಎಸ್) – ನಿಗಮದ ಅಂತರ್ಜಾಲದಲ್ಲಿ ಪ್ರಕಟಿಸಲು
6. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರುಗಳು (ವಿ)/ (ಸಿವಿಲ್), ಕವಿಪ್ರನಿನಿ.
7. ಎಲ್ಲಾ ಉಪಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ.
8. ಲೆಕ್ಕಾಧಿಕಾರಿ (ಕೋಡೀಫಿಕೇಷನ್), ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
9. ವ್ಯವಸ್ಥಾಪಕ ನಿರ್ದೇಶಕರು/ ನಿರ್ದೇಶಕರು (ಹಣಕಾಸು)/ ನಿರ್ದೇಶಕರು (ಪ್ರಸರಣ)/ ನಿರ್ದೇಶಕರು (ಆ ಮತ್ತು ಮಾ. ಸಂ). ನಿರ್ದೇಶಕರು ಮತ್ತು ಕಂ. ಕಾ ರವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

<u>ಕರ್ನಾಟಕ ಸರ್ಕಾರ</u>

ಸಂಖ್ಯೆ:ಆಇ 876 (P-1) ವೆಚ್ಚ-12/17

ಕರ್ನಾಟಕ ಸರ್ಕಾರದ ಸಚಿವಾಲಯ
ಆರ್ಥಿಕ ಇಲಾಖೆ,
ಬೆಂಗಳೂರು, ದಿನಾಂಕ:12.10.2017

**<u>ಸುತ್ತೋಲೆ</u>**

ವಿಷಯ : Randomisation ಮೂಲಕ ಕಾಮಗಾರಿಗಳನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

*****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಕೆ.ಟಿ.ಪಿ.ಪಿ ಕಾಯ್ದೆಯ ಸೆಕ್ಷನ್ 6 ಅನುಸಾರ ಕೆ.ಟಿ.ಪಿ.ಪಿ ನಿಯಮಗಳು 2000ರ ನಿಯಮ 27A ರಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಮುದಾಯಕ್ಕೆ ಸೇರಿದ ಟೆಂಡರ್‌ದಾರರಿಗೆ ರೂ.50.00 ಲಕ್ಷಗಳ ಮಿತಿಯೊಳಗಿನ ನಿರ್ಮಾಣ ಕಾಮಗಾರಿಗಳ ಟೆಂಡರ್‌ಗಳಲ್ಲಿ ವಿಶೇಷ ಆದ್ಯತೆ ನೀಡುವ ಕುರಿತು ನಿಯಮಗಳನ್ನು ಹೊರಡಿಸಲಾಗಿದೆ. ಸದರಿ ನಿಯಮಗಳ ಅನುಸಾರ ಸಂಬಂಧಪಟ್ಟ ಟೆಂಡರ್ ಆಹ್ವಾನಿಸುವ ಪ್ರಾಧಿಕಾರವು ಕಾಮಗಾರಿಗಳ ಆಯ್ಕೆಯನ್ನು randomization ಪದ್ಧತಿ ಮೂಲಕ ಮಾಡಿಕೊಳ್ಳಲು ತಿಳಿಸಲಾಗಿದೆ. ಪ್ರಸ್ತುತ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ (ಇ-ಆಡಳಿತ) ಇಲಾಖೆಯು randomization ಕೈಗೊಳ್ಳಲು ಅನುಕೂಲವಾಗುವಂತೆ ತಂತ್ರಾಂಶವನ್ನು ಅಭಿವೃದ್ಧಿಪಡಿಸಿದ್ದು, ಇದು ದಿನಾಂಕ:09.10.2017 ರಿಂದ e-procurement portal ನಲ್ಲಿ ಲಭ್ಯವಿರುತ್ತದೆ. ಸದರಿ ತಂತ್ರಾಂಶವನ್ನು ಎಲ್ಲಾ ಇಲಾಖೆಗಳ ಟೆಂಡರ್ ಆಹ್ವಾನಿಸುವ ಪ್ರಾಧಿಕಾರಗಳು ಕಡ್ಡಾಯವಾಗಿ ಉಪಯೋಗಿಸಿಕೊಳ್ಳತಕ್ಕದ್ದು.

(ಶ್ರೀಕೃಷ್ಣ ಎನ್ ಬುಗಟ್ಯಾಗೋಳ)
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ
(ಲೋಕೋಪಯೋಗಿ ಆರ್ಥಿಕ ಕೋಶ)
12/10

ಸರ್ಕಾರದ ಎಲ್ಲಾ ಸಂಗ್ರಹಣಾ ಸಂಸ್ಥೆಗಳು.

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ-IVA | ಬೆಂಗಳೂರು, ಶನಿವಾರ, ಸೆಪ್ಟೆಂಬರ್ ೧೬, ೨೦೧೭ (ಭಾದ್ರಪದ ೨೫, ಶಕ ವರ್ಷ ೧೯೩೯) | ನಂ. ೮೮೬ |
|---|---|---|
| *Part-IVA* | *Bengaluru, Saturday, September 16, 2017 (Bhadrapada 25, Shaka Varsha 1939)* | *No. 886* |


**FINANCE SECRETARIAT**

**NOTIFICATION**

**NO: FD 876 Exp-12/2017, Bengaluru, dated : 15.09.2017**

In exercise of the powers conferred by sub-section (1) of Section 25 of the Karnataka Transparency in Public Procurements Act, 1999 (Karnataka Act 29 of 2000) the Government of Karnataka hereby makes the following rules further to amend the Karnataka Transparency in Public Procurement Rules, 2000, namely:-

1. **Title and commencement:-** (1) These rules may be called the Karnataka Transparency in Public Procurements (Amendment) Rules, 2017.

   (2) They shall come into force from the date of their publication in the Official Gazette.

2. **Insertion of new rule 27A :-** In the Karnataka Transparency in Public Procurements Rules, 2000, After Rule 27, the following shall be inserted, namely:-

**27(A) : Preference to Tenderers belonging to the Scheduled Castes or Scheduled Tribes in Construction Works.-** For the purpose of these rules, all procurement entities specified under clause (d) of section 2, which are taking up Construction works shall be the notified departments and they shall follow the following procedures, namely:-

(a) all works approved in the Action Plan or Appendix-E of every financial year, the value of which does not exceed Rs.50.00 lakh shall be put to randomization for selecting 17.15% of these works to be tendered among registered contractors belonging to the Scheduled Castes Category and 6.95% to be tendered among contractors belonging to the Scheduled Tribes Category.

(b) Works subsequently approved shall also have to be put to randomization periodically.

(c) for randomization, an Engineering Division or the Jurisdiction of the Tender Inviting Authority shall be considered as a unit.

(d) randomization of works shall be done when the number of works are more than four.

(e) once a particular work is included in randomization process or were not put to randomization due to lack of adequate number of works, they shall not be put to randomization again for the reasons that they were not selected during the first randomization process.

(f) if no qualified tenderers belonging to the Scheduled Castes or Scheduled Tribes participate in the bid in two attempts under this rule, then these works shall be tendered as open category wherein all eligible bidders of General or Scheduled Castes or Scheduled Tribes category can participate.

(g) it shall be responsibility of the Executive Engineer or Tender Inviting Authority to verify the eligibility of the tenderers belonging to the Scheduled Castes or Scheduled Tribes. Verification of tenderers belonging to the Scheduled Castes or Scheduled Tribes shall be done by the Tender Inviting Authority subject to explanations provided in Section 6.

(h) if the contractor is a firm, then all the partners or members of the firm shall belong to the Scheduled Castes or Scheduled Tribes as the case may be.

(i) the contractor belonging to the Scheduled Castes or Scheduled Tribes shall be domicile of the State of Karnataka for more than 10 years.

By order and in the name of the Governor of Karnataka

**Sadanand N.Pavaskar**
Under Secretary to Government (I/c)
Finance Department
(Procurement Cell)

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) ಪ್ರತಿಗಳು: 500

ಫೋನ್ ನಂ. 080-22243926
ಫ್ಯಾಕ್ಸ್ ನಂ. 080-22110134
ವೆಬ್ ಸೈಟ್:www.kptcl.com
ಇ-ಮೇಲ್ :dgmtkptcl@rediffmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

Corporate Identity Number(CIN):U40109KA1999SGC025521

ನಂ: ಬಿ19/84/94-95
ಲಗತ್ತು: ಪತ್ರ + ಗೆಜೆಟ್ ಪ್ರತಿ

ನಿಗಮ ಕಾರ್ಯಾಲಯ
ಕಾವೇರಿ ಭವನ
ಬೆಂಗಳೂರು--560 009.
ದಿನಾಂಕ:23.08.2017

ಎಲ್ಲಾ ಮುಖ್ಯ ಇಂಜಿನಿಯರ್(ವಿ),
ಕವಿಪ್ರನಿನಿ,

ಮಾನ್ಯರೇ,

ವಿಷಯ: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಗುತ್ತಿಗೆದಾರರಿಗೆ ಟೆಂಡರ್ ಕಾಮಗಾರಿಗಳಲ್ಲಿ ಮೀಸಲಾತಿ ನೀಡುವಂತೆ ಸರ್ಕಾರವು ಹೊರಡಿಸಿರುವ ಆದೇಶದನ್ವಯ ನಿಗಮದಿಂದ ಅನುಷ್ಠಾನಗೊಳಿಸುವ ಗುತ್ತಿಗೆ ಕಾಮಗಾರಿಗಳಲ್ಲಿ ಅಳವಡಿಸಿಕೊಳ್ಳುವ ಕುರಿತು.

ಉಲ್ಲೇಖ:
1. ಅಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇವರ ಟಿಪ್ಪಣಿ ಸಂಖ್ಯೆ: ಸಕ& ಹಿಂವಕಸ/ಅಕಾ/ಟಿ/5054/2017 ದಿನಾಂಕ:26.07.2017.
2. ಸರ್ಕಾರದ ಆದೇಶ ಸಂಖ್ಯೆ: ಸಂವ್ಯಶಾಇ 22 ಶಾಸನ 2016, ಬೆಂಗಳೂರು, ದಿನಾಂಕ; 29.06.2017 ಕರ್ನಾಟಕ ರಾಜ್ಯ ಪತ್ರ.

-----------

ಸರ್ಕಾರದ ಆದೇಶ ಸಂಖ್ಯೆ: ಸಂವ್ಯಶಾಇ 22 ಶಾಸನ 2016, ಬೆಂಗಳೂರು, ದಿನಾಂಕ;29.06.2017 ಕರ್ನಾಟಕ ರಾಜ್ಯ ಪತ್ರ (ವಿಶೇಷ ರಾಜ್ಯ ಪತ್ರಿಕೆ) ದಿನಾಂಕ:29.06.2017ರಲ್ಲಿ, ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ 2016 ಪ್ರಕಟವಾಗಿರುತ್ತದೆ. ಇದಕ್ಕೆ ಸಂಬಂಧಿಸಿದಂತೆ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ರವರು ತಮ್ಮ ಟಿಪ್ಪಣಿ ದಿನಾಂಕ 26.07.2017 ರಲ್ಲಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಗುತ್ತಿಗೆದಾರರಿಗೆ ಟೆಂಡರ್ ಕಾಮಗಾರಿಗಳಲ್ಲಿ ಮೀಸಲಾತಿ ನೀಡುವಂತೆ ಸರ್ಕಾರವು ಹೊರಡಿಸಿರುವ ಆದೇಶದನ್ವಯ ನಿಗಮದಿಂದ ಅನುಷ್ಠಾನಗೊಳಿಸುವ ಗುತ್ತಿಗೆ ಕಾಮಗಾರಿಗಳಲ್ಲಿ ಅಳವಡಿಸಿಕೊಳ್ಳುವಂತೆ ಸೂಚಿಸಿರುತ್ತಾರೆ.

ಮುಂದುವರೆದು, ಇದಕ್ಕೆ ಸಂಬಂಧಿಸಿದಂತೆ ಹೊರಡಿಸಿರುವ ಗೆಜೆಟ್ ಪ್ರತಿಯನ್ನು ಮುಂದಿನ ಕ್ರಮಕ್ಕಾಗಿ ಕಳುಹಿಸಿಕೊಡಲಾಗಿದೆ.

ನಿಮ್ಮ ವಿಶ್ವಾಸಿ,
23/8
ಉಪ ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ)
ಕವಿಪ್ರನಿನಿ

ಪ್ರತಿಗಳು:

1. ಆರ್ಥಿಕ ಸಲಹೆಗಾರರು( ಎ ಮತ್ತು ಆರ್)/(ಅಂ. ಪ), ಕವಿಪ್ರನಿನಿ. ಕಾವೇರಿಭವನ, ಬೆಂಗಳೂರು.
2. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ),ಕವಿಪ್ರನಿನಿ
3. ಎಲ್ಲಾ ಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ.
4. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕವಿಪ್ರನಿನಿ.
5. ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಹಣಕಾಸು)/ನಿರ್ದೇಶಕರು(ಪ್ರಸರಣ)/ನಿರ್ದೇಶಕರು(ಆ ಮತ್ತು ಮಾ.ಸಂ). ನಿರ್ದೇಶಕರು ಮತ್ತು ಕಂ.ಕಾ ರವರುಗಳ ಅಪ್ತ ಕಾರ್ಯದರ್ಶಿಗಳು, ಕವಿಪ್ರನಿನಿ, ಕಾವೇರಿಭವನ, ಬೆಂಗಳೂರು.
6. ಅಧೀಕ್ಷಕ ಇಂಜಿನಿಯರ್(ವಿ), (ಐಟಿ ಮತ್ತು ಎಂಐಎಸ್), ಕವಿಪ್ರನಿನಿ, ಕಾವೇರಿಭವನ ರವರಿಗೆ ಸದರಿ ಪತ್ರವನ್ನು ನಿಗಮದ ವೆಬ್ ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ.

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| | | |
|---|---|---|
| ಭಾಗ-IVA | ಬೆಂಗಳೂರು, ಸೋಮವಾರ, ಜುಲೈ ೧೭, ೨೦೧೭ (ಆಷಾಢ ೨೬, ಶಕ ವರ್ಷ ೧೯೩೯) | ನಂ. ೬೯೨ |
| *Part-IVA* | *Bengaluru, Monday, July 17, 2017 (Ashada 26, Shaka Varsha 1939)* | *No. 692* |


**PARLIAMENTARY AFFAIRS SECRETARIAT**

**NOTIFICATION**

**NO. DPAL 22 SHASANA 2016, Bengaluru, dated: 17.07.2017**

Ordered that the translation of the ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2016 (2017ರ ಕರ್ನಾಟಕ ಅಧಿನಿಯಮ ಸಂಖ್ಯೆ: 31) in the English language, be published as authorised by the Governor of Karnataka under clause (3) of Article 348 of the constitution of India in the Karnataka Gazette for general information.

The following translation of the ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2016 (2017ರ ಕರ್ನಾಟಕ ಅಧಿನಿಯಮ ಸಂಖ್ಯೆ: 31) in the English language is published in the Official Gazette under the authority of the Governor of Karnataka under clause (3) of Article 348 of the Constitution of India.

**KARNATAKA ACT NO. 31 OF 2017**

(First Published in the Karnataka Gazette Extra-ordinary on the 29th day of June, 2017)

**THE KARNATAKA TRANSPARENCY IN PUBLIC PROCUREMENTS (AMENDMENT) ACT, 2016**

(Received the assent of the President on the 20th day of June, 2017)

An Act further to amend the Karnataka Transparency in Public Procurements Act, 1999.

Whereas it is expedient further to amend the Karnataka Transparency in Public Procurements Act, 1999 (Karnataka Act 28 of 2000) for the purposes hereinafter appearing;

Be it enacted by the Karnataka State Legislature in the sixty seventh year of the Republic of India as follows:-

**1. Short title and commencement.-** (1) This Act may be called the Karnataka Transparency in Public Procurements (Amendment) Act, 2016.

(2) It shall come into force at once.

**2. Amendment of section 6.-** In the Karnataka Transparency in Public Procurements Act, 1999 (Karnataka Act 28 of 2000), after Section 6, the following shall be inserted, namely:-

"Provided that, the tender inviting authority shall, in the notified Departments out of those construction works, value of which does not exceed Rs.50.00 Lakhs such number of works not exceeding 17.15 percent be tendered only among the tenderers belonging to the Scheduled Castes Category and such number of works not exceeding 6.95 percent be tendered only among tenderers belonging to the Scheduled Tribes Category, by taking out notices, communications and publications required to be taken following the prescribed procedures:

Provided further that, if no tender from persons belonging to the Scheduled Castes or Scheduled Tribes as the case may be, is received in response to the invitation in two attempts such works may be tendered among others.

**Explanation:-** For the purpose of this proviso,-

(1) "Scheduled Castes" shall have reference to the Scheduled Castes specified in part VII of the Constitution (Scheduled Castes) Order, 1950 made under Article 341 of the Constitution of India and as amended from time to time;

(2) "Scheduled Tribes" shall have reference to the Scheduled Tribes specified in part VI of the Constitution (Scheduled Tribes) Order, 1950 made under Article 342 of the Constitution of India and as amended from time to time;"

The above translation of ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2016 (2017ರ ಕರ್ನಾಟಕ ಅಧಿನಿಯಮ ಸಂಖ್ಯೆ: 31) be published in the Official Gazette under clause (3) of Article 348 of the Constitution of India.

**VAJUBHAI VALA**
**GOVERNOR OF KARNATAKA**

By order and in the name of the Governor of Karnataka,

**K. DWARAKANATH BABU**
Secretary to Government
Department of Parliamentary Affairs

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) ಪ್ರತಿಗಳು: 400

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ


| ಭಾಗ-IVA | ಬೆಂಗಳೂರು, ಗುರುವಾರ, ಜೂನ್ ೨೯, ೨೦೧೭ (ಆಷಾಢ ೦೮, ಶಕ ವರ್ಷ ೧೯೩೯) | ಸಂ. ೫೯೦ |
|---|---|---|
| Part-IVA | Bengaluru, Thursday, June 29, 2017 (Ashada 08, Shaka Varsha 1939) | No. 590 |


ಸಂಸದೀಯ ವ್ಯವಹಾರಗಳ ಸಚಿವಾಲಯ

ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 22 ಶಾಸನ 2016, ಬೆಂಗಳೂರು, ದಿನಾಂಕ: 29.06.2017**

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ವಿಧೇಯಕ, 2016 ಕ್ಕೆ 2017ರ ಜೂನ್ ತಿಂಗಳ 20ನೇ ದಿನಾಂಕದಂದು ರಾಷ್ಟ್ರಾಧ್ಯಕ್ಷರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2017ರ ಕರ್ನಾಟಕ ಅಧಿನಿಯಮ ಸಂಖ್ಯೆ: 31 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2017ರ ಕರ್ನಾಟಕ ಅಧಿನಿಯಮ ಸಂಖ್ಯೆ: 31**

(2017ರ ಜೂನ್ 29ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2016**

(2017ರ ಜೂನ್ 20ನೇ ದಿನಾಂಕದಂದು ರಾಷ್ಟ್ರಾಧ್ಯಕ್ಷರಿಂದ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ನ್ನು (2000ರ ಕರ್ನಾಟಕ ಅಧಿನಿಯಮ 28) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು, ಭಾರತ ಗಣರಾಜ್ಯದ ಅರವತ್ತೇಳನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗತಕ್ಕದ್ದು:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2016 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. 6ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ರ (2000ರ ಕರ್ನಾಟಕ ಅಧಿನಿಯಮ 28) 6ನೇ ಪ್ರಕರಣದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"ಪರಂತು, ಟೆಂಡರ್ ಆಹ್ವಾನಿಸುವ ಪ್ರಾಧಿಕಾರವು, ಅಧಿಸೂಚಿತ ಇಲಾಖೆಗಳಲ್ಲಿ ನಿಯಮಿಸಿದ ಪ್ರಕ್ರಿಯೆಗಳನ್ನು ಅನುಸರಿಸುವ ಮೂಲಕ ಕೈಗೊಳ್ಳಬೇಕಾದ ಅಗತ್ಯ ನೋಟೀಸುಗಳು, ಪತ್ರ ವ್ಯವಹಾರಗಳು ಮತ್ತು ಪ್ರಕಟಣೆಗಳನ್ನು ಹೊರಡಿಸುವಾಗ ನಿರ್ಮಾಣ ಕಾಮಗಾರಿಗಳ ಮೌಲ್ಯ 50 ಲಕ್ಷ ರೂಪಾಯಿಗಳಿಗೆ ಮೀರದ ಅಂಥ ಕಾಮಗಾರಿಗಳ ಶೇಕಡ 17.15ರಷ್ಟು ಸಂಖ್ಯೆಯನ್ನು ಮೀರದಂತೆ ಅನುಸೂಚಿತ ಜಾತಿಗಳ ವರ್ಗಕ್ಕೆ ಸೇರಿದವರಿಗೆ ಟೆಂಡರುದಾರರುಗಳ ಪೈಕಿ ಮಾತ್ರ ಟೆಂಡರನ್ನು ನೀಡತಕ್ಕದ್ದು ಮತ್ತು ಅಂಥ ಕಾಮಗಾರಿಗಳ ಶೇಕಡ 6.95ರಷ್ಟು ಸಂಖ್ಯೆಯನ್ನು ಮೀರದಂತೆ ಅನುಸೂಚಿತ ಪಂಗಡಗಳ ವರ್ಗಕ್ಕೆ ಸೇರಿದವರಿಗೆ ಟೆಂಡರುದಾರರುಗಳ ಪೈಕಿ ಮಾತ್ರ ಟೆಂಡರನ್ನು ನೀಡತಕ್ಕದ್ದು:

ಮತ್ತು ಪರಂತು, ಎರಡು ಬಾರಿಗಳಲ್ಲಿ ಆಹ್ವಾನಿಸಿರುವುದಕ್ಕೆ ಪ್ರತಿಕ್ರಿಯೆಯಾಗಿ ಅನುಸೂಚಿತ ಜಾತಿಗಳು ಅಥವಾ ಸಂದರ್ಭಾನುಸಾರವಾಗಿ ಅನುಸೂಚಿತ ಪಂಗಡಗಳಿಗೆ ಸೇರಿದ ವ್ಯಕ್ತಿಗಳಿಂದ ಟೆಂಡರ್ ಸ್ವೀಕರಿಸದಿದ್ದಲ್ಲಿ, ಅಂಥ ಕಾಮಗಾರಿಗಳನ್ನು ಇತರರಿಗೆ ಟೆಂಡರ್ ನೀಡಬಹುದು.

ವಿವರಣೆ:- ಈ ಪರಂತುಕದ ಉದ್ದೇಶಕ್ಕಾಗಿ,-

(1) "ಅನುಸೂಚಿತ ಜಾತಿಗಳು" ಭಾರತ ಸಂವಿಧಾನದ 341ನೇ ಅನುಚ್ಛೇದದ ಅಡಿಯಲ್ಲಿ ಮಾಡಿದ ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950ರ ಭಾಗ- VII ರಲ್ಲಿ ನಿರ್ದಿಷ್ಟಪಡಿಸಿದ ಮತ್ತು ಕಾಲಕಾಲಕ್ಕೆ ತಿದ್ದುಪಡಿಯಾದಂತೆ ಅನುಸೂಚಿತ ಜಾತಿಗಳ ಉಲ್ಲೇಖ ಹೊಂದಿರತಕ್ಕದ್ದು.

(2) "ಅನುಸೂಚಿತ ಪಂಗಡಗಳು" ಭಾರತ ಸಂವಿಧಾನದ 342ನೇ ಅನುಚ್ಛೇದದ ಅಡಿಯಲ್ಲಿ ಮಾಡಿದ ಸಂವಿಧಾನ (ಅನುಸೂಚಿತ ಪಂಗಡಗಳು) ಆದೇಶ, 1950ರ ಭಾಗ- VI ರಲ್ಲಿ ನಿರ್ದಿಷ್ಟಪಡಿಸಿದ ಮತ್ತು ಕಾಲಕಾಲಕ್ಕೆ ತಿದ್ದುಪಡಿಯಾದಂತೆ ಅನುಸೂಚಿತ ಪಂಗಡಗಳ ಉಲ್ಲೇಖ ಹೊಂದಿರತಕ್ಕದ್ದು."

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಕೆ. ದ್ವಾರಕನಾಥ್ ಬಾಬು**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಔ7) ಪ್ರತಿಗಳು: 500